**<u>ದಿನಾಂಕಃ 23.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು:- ವಾದಿ ಪರ ಶ್ರೀ ಎಂ.ಎಂ. ವಕೀಲರಿಂದಃ</u>**

1) ನಾನು ದ್ವಿತೀಯ ಪಿಯುಸಿ ವರೆಗೂ ವಿದ್ಯಾಭ್ಯಾಸ ಮಾಡಿರುತ್ತೇನೆ. ನನಗೆ ಆಂಗ್ಲ ಭಾಷೆ ಓದಲು ಅಷ್ಟಾಗಿ ಬರುವುದಿಲ್ಲ. ದಾವಾ ಸ್ವತ್ತನ್ನು ನಾನು ನೋಡಿರುತ್ತೇನೆ. ದಾವಾ ಸ್ವತ್ತಿನ ಸರ್ವೆ ನಂಬರ್ 234. ದಾವಾ ಸ್ವತ್ತಿನ ಪಶ್ಚಿಮಕ್ಕೆ ಮಾರೇಗೌಡರ ಜಮೀನು ಇರುವುದಿಲ್ಲ. ದಾವಾ ಸ್ವತ್ತಿನ ದಕ್ಷಿಣ ದಿಕ್ಕಿಗೆ ಈರೇಗೌಡರ ಕುಟುಂಬಕ್ಕೆ ಸೇರಿದ ಸ್ವತ್ತು ಇದೆ. ನಾನು ದಾವಾ ಸ್ವತ್ತನ್ನು ನೋಡಿಲ್ಲ ಮತ್ತು ಆ ಸ್ವತ್ತಿನ ಅಕ್ಕಪಕ್ಕದ ಸ್ವತ್ತುಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಪಶ್ಚಿಮ ದಿಕ್ಕಿಗೆ ಈರೇಗೌಡರ ಜಮೀನು ಇದೆ ಎಂದರೆ ಸರಿಯಲ್ಲ. ಈರೇಗೌಡರು ತಮ್ಮ ಸ್ವತ್ತನ್ನು ಮಾರೇಗೌಡರಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಈರೇಗೌಡರ ಸ್ವತ್ತಿನ ಸರ್ವೆ ನಂಬರ್ 234/ ಪಿ7 ಎಂದರೆ ಸಾಕ್ಷಿಯು ಅಲ್ಲಿ ಎಲ್ಲಾ ಜಮೀನುಗಳು ಸರ್ವೆ ನಂಬರ್ 234 ರಲ್ಲಿ ಇರುವುದಾಗಿ ನುಡಿಯುತ್ತಾರೆ.

2) ಈರೇಗೌಡರ ಸ್ವತ್ತಿನ ದಕ್ಷಿಣಕ್ಕೆ ಹಳ್ಳ ಇದೆ ಎಂದರೆ ಸರಿ. ದಾವಾ ಸ್ವತ್ತಿನ ದಕ್ಷಿಣಕ್ಕೆ ಹಳ್ಳ ಇದೆ ಎಂದರೆ ಸರಿ. ಪ್ರೇಮ ರವರ ಗಂಡನ ಹೆಸರು ಬಸವರಾಜ್. ಪ್ರತಿವಾದಿ ಪ್ರೇಮ ರವರು ನನ್ನ ದೂರದ ಸಂಬಂಧಿಕರು. ಪ್ರತಿವಾದಿ ನನ್ನ ಸಂಬಂಧಿ ಇರುವ ಕಾರಣ ಆಕೆಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3) ದಾವಾ ಸ್ವತ್ತಿನ ಪೈಕಿ 2 ಎಕರೆ ಜಮೀನಿನಲ್ಲಿ ಒಂದನೇ ವಾದಿ ಹಾಗೂ ಉಳಿದ ಒಂದು ಎಕರೆ ಜಮೀನಿನಲ್ಲಿ ಎರಡನೇ ವಾದಿ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸಾಕ್ಷಿಯು ವಾದಿಗಳಿಗೆ ಅಲ್ಲಿ ಯಾವುದೇ ಜಮೀನು ಇಲ್ಲ ಎಂದು ನುಡಿಯುತ್ತಾರೆ. ದಾವಾ ಸ್ವತ್ತನ್ನು ಅಳತೆ ಮಾಡಲು ಎರಡು ಬಾರಿ ತಾಲ್ಲೂಕು ಸರ್ವೆ ಅಧಿಕಾರಿಗಳು ಬಂದಿದ್ದರು ಎಂಬ ಬಗ್ಗೆ ನನಗೆ ತಿಳಿದಿದೆ. ದಾವಾ ಸ್ವತ್ತಿನ ಮೇಲೆ ಪ್ರತಿವಾದಿಗೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯ ಮಾತು ಕೇಳಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ:- ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು).

ಓ. ಹೆ. ಕೇ. ಸರಿ ಇದೆ.

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ**
**ನ್ಯಾಯಾಲಯ, ಚನ್ನಪಟ್ಟಣ.**